ಪ್ರಸ್ತಾವ ಅಂಗೀಕಾರ

ಶ್ರೀ ಜಗದೀಶ್ ಶೆಟ್ಟರ್ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ಕರ್ನಾಟಕ ಧನವಿನಿಯೋಗ ವಿಧೇಯಕ 2013 ಅನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವವನ್ನು ಮಂಡಿಸಲಾಗಿದೆ ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2013ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು

ಪ್ರಸ್ತಾವದ ಪರವಾಗಿರುವವರು **"ಹೌದು"** ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು **"ಇಲ್ಲ"** ಎಂದು ಸೂಚಿಸಬೇಕು
ಪ್ರಸ್ತಾವವು **"ಹೌದು"** ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.
ಪ್ರಸ್ತಾವವು **"ಹೌದು"** ಎನ್ನುವವರ ಪರವಾಗಿದೆ
ಪ್ರಸ್ತಾವವು **"ಹೌದು"** ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನ ದೊರಕಿದೆ

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಅನುಮೋದನೆ ನೀಡಲಾಯಿತು)

ಅಧ್ಯಕ್ಷರು: ಪ್ರಶ್ನೋತ್ತರಗಳನ್ನು ಮಂಡಿಸುವುದು.

8. ಪ್ರಶ್ನೋತ್ತರಗಳ ಮಂಡನೆ

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳನ್ನು ದಿನಾಂಕ 13-02-2013ರ ಚುಕ್ಕೆ ಗುರುತಿನ ಸಭೆಯ ಮುಂದೆ ಮಂಡಿಸುವುದು.

ಶ್ರೀ ಎಸ್.ಸುರೇಶ್‌ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೆ, ದಿನಾಂಕ:13.02.2013ರ 5ನೇ ಪಟ್ಟಿಯಿಂದ ಸದನದಲ್ಲಿ ಉತ್ತರಿಸುವ 15 ಚುಕ್ಕೆ ಗುರ್ತಿನ ಪ್ರಶ್ನೆಗಳ ಪೈಕಿ 13 ಪ್ರಶ್ನೆಗಳ ಉತ್ತರಗಳನ್ನು ಹಾಗೂ ಲಿಖಿತ ಮೂಲಕ ಉತ್ತರಿಸುವ 62 ಪ್ರಶ್ನೆಗಳ ಪೈಕಿ 57 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಯಿತು. **(ಅನುಬಂಧ-9)**